**ಸಾಕ್ಷಿಯನ್ನು ಸತ್ಯ ಪ್ರತಿಜ್ಞೆಯ ಮೇರೆಗೆ ಇಂದು ದಿನಾಂಕಃ 16.07.2025 ರಂದು ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಎಸ್ ಜೆ ವಕೀಲರಿಂದಃ**

ನಾನು ಈ ದಾವೆಯಲ್ಲಿ ವಾದಿ ಪರ ಸಾಕ್ಷಿದಾರ ಇರುತ್ತೇನೆ. ಈ ದಿನ ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮುಖಾಂತರ ಸಲ್ಲಿಸಿರುತ್ತೇನೆ. ನನ್ನ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ವಿಷಯಗಳು ನನಗೆ ತಿಳಿದ ಮಾಹಿತಿಯಂತೆ ಸತ್ಯವಾಗಿರುತ್ತವೆ. ಪ್ರಮಾಣ ಪತ್ರವನ್ನು ನಾನು ನೀಡಿದ ಮಾಹಿತಿ ಮೇರೆಗೆ ತಯಾರಿಸಲಾಗಿರುತ್ತದೆ. ಪ್ರಮಾಣ ಪತ್ರವನ್ನು ನನಗೆ ಓದಿ ಹೇಳಲಾಗಿದ್ದು, ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸಾಕ್ಷಿಗೆ ನಿ ಪಿ 15 ಅನ್ನು ತೋರಿಸಲಾಗಿ ಸದರಿ ದಾಖಲೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆಯು ವಿಭಾಗ ಪತ್ರವಾಗಿದ್ದು, ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ ಪಿ 15 (ಎ) ಎಂದು ಗುರುತಿಸಲಾಯಿತು. ಸದರಿ ದಾಖಲೆಯ ಇತರೆ ಸಾಕ್ಷಿದಾರರು ಮತ್ತು ಪತ್ರ ಬರಹಗಾರರು ಈಗ ಮೃತಪಟ್ಟಿರುತ್ತಾರೆ. ಸಾಕ್ಷಿಯು ಮಂಗಳಮ್ಮ ಮತ್ತು ಸಣ್ಣಮ್ಮನವರ ಹೆಬ್ಬೆಟ್ಟು ಗುರುತು ನೋಡಿ ಗುರುತಿಸಿರುತ್ತಾರೆ.

ವಾದಿಯ ದಾವೆಯನ್ನು ಪುರಸ್ಕರಿಸಬೇಕಾಗಿ ಮಾನ್ಯ ನ್ಯಾಯಾಲಯದಲ್ಲಿ ಪ್ರಾರ್ಥಿಸಿಕೊಳ್ಳುತ್ತೇನೆ.

2 ನೇ ಪ್ರತಿವಾದಿ ಗೈರು ಹಾಜರಿದ್ದು ಮತ್ತು 2 ನೇ ಪ್ರತಿವಾದಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದರೂ ಸಹ 2 ನೇ ಪ್ರತಿವಾದಿ ತನ್ನ ಪ್ರತಿವಾದ ಪತ್ರ ಸಲ್ಲಿಸದ ಕಾರಣ ಮತ್ತು ಪಿ ಡಬ್ಲೂ 1 ರವರನ್ನು ಸಹ ಪಾಟೀ ಸವಾಲು ಮಾಡದ ಕಾರಣ ಈ ಸಾಕ್ಷಿಯ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿಯಾಗಿದೆ.

**(ಸಚಿನ್.ಹೆಚ್.ಆರ್)**

ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ

ತಿ.ನರಸೀಪುರ.